ಕರ್ನಾಟಕ ಸರ್ಕಾರ

# **ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:28-03-2022

## **ಸುತ್ತೋಲೆ**

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:17.01.2022. ಮತ್ತು ದಿನಾಂಕ:28.01.2022.

* * * * * * *

2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗಿರುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಇದುವರೆವಿಗೂ ನಡೆದ 4 ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಅಭ್ಯರ್ಥಿಗಳು ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಈ ರೀತಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಅಭ್ಯರ್ಥಿಗಳು ವಿವಿಧ ಕಾರಣಗಳನ್ನು ನೀಡಿ, ಸ್ಥಳ/ಕಾಲೇಜು ಬದಲಾವಣೆ ಮಾಡಿಕೊಡುವಂತೆ ಮನವಿಗಳು ಸ್ವೀಕೃತವಾಗಿದ್ದ ಹಿನ್ನಲೆಯಲ್ಲಿ ಅಂತಹ ಅತಿಥಿ ಉಪನ್ಯಾಸಕರು ಸಂಬಂಧಪಟ್ಟ ಕಾಲೇಜಿನ ಪಾಂಶುಪಾಲರಿಗೆ ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು. **ಅದರಂತೆ, ಅರ್ಜಿ ಸಲ್ಲಿಸಿರುವ ಅತಿಥಿ ಉಪನ್ಯಾಸಕರಿಗೆ ಒಂದು ಭಾರಿಯ ಕ್ರಮವಾಗಿ, ವಿವಿಧ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಲಭ್ಯವಿರುವ ಕಾರ್ಯಭಾರಕ್ಕೆ ದಿನಾಂಕ:29.03.2022 ರಂದು ಆನ್‌ಲೈನ್ ಕೌನ್ಸಿಲಿಂಗ್ ನ್ನು ಆಯೋಜಿಸಲಾಗಿದೆ. ಸದರಿ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸುವ ಅತಿಥಿ ಉಪನ್ಯಾಸಕರು ತಮಗೆ ಅವಶ್ಯವಿದ್ದ ಕಾಲೇಜುಗಳು ಆಯ್ಕೆಯಾಗದೇ ಇದ್ದಲ್ಲಿ ಸದರಿ ಅತಿಥಿ ಉಪನ್ಯಾಸಕರು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾಲೇಜಿನಲ್ಲಿಯೇ ಮುಂದುವರೆಯಬಹುದಾಗಿದೆ.**

**ಮುಂದುವರೆದು, ಮೇಲಿನ ಪ್ರಕ್ರಿಯೆ ನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ವಿಷಯವಾರು ರಾಜ್ಯವಾಪಿ ತಾತ್ಕಾಲಿಕ ಆಯ್ಕೆಪಟ್ಟಿಯನ್ವಯ 5ನೇ ಸುತ್ತಿನ ಕೌನ್ಸಿಲಿಂಗ್ ಅನ್ನು ದಿನಾಂಕ:30.03.2022 ರಂದು ನಡೆಸಲಾಗುವುದು.**

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

28/03/2022

**ಮುಖ್ಯ ಆಡಳಿತಾಧಿಕಾರಿಗಳು**
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:**

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.